ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

ಉಪನಗರ ಸಮಾಚಾರ

# ಅಂಗನವಾಡಿಗಳ ಮೂಲ ಸೌಕರ್ಯಕ್ಕೆ ಶಿಫಾರಸು

**ಟಿ.ದಾಸರಹಳ್ಳಿ:** ಅಂಗನವಾಡಿ ಕೇಂದ್ರಗಳಿಗೆ ಅಗತ್ಯ ಮೂಲಸೌಕರ್ಯ ಒದಗಿಸಲು ಸರ್ಕಾರಕ್ಕೆ ಶಿಫಾರಸು ಮಾಡುವುದಾಗಿ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಕೆ.ಪೂರ್ಣಿಮಾ ತಿಳಿಸಿದರು.

ಸಮೀಪದ ಚಿಕ್ಕಬಾಣಾವಾರದಲ್ಲಿರುವ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಹಾಗೂ ತರಬೇತಿ ಕೇಂದ್ರಕ್ಕೆ ಭೇಟಿ ನೀಡಿ ಸಂಸ್ಥೆಯ ಕಾರ್ಯನಿರ್ವಹಣೆ ಪ್ಯಾಕಿಂಗ್, ಆಹಾರ ಪದಾರ್ಥಗಳ ಗುಣಮಟ್ಟ ಪರಿಶೀಲನೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಗರ್ಭಿಣಿ, ಬಾಣಂತಿ ಮಹಿಳೆಯರು ಹಾಗೂ ಮಕ್ಕಳ ಆರೋಗ್ಯ ರಕ್ಷಣೆಗೆ ಅಂಗನವಾಡಿ ಕೇಂದ್ರಗಳಲ್ಲಿ ಅಡುಗೆ ಮಾಡಿ ಪೌಷ್ಟಿಕಾಂಶಯುತ ಆಹಾರವನ್ನು ನೀಡಲಾಗುತ್ತಿದೆ. ಬಹುತೇಕ ಅಂಗನವಾಡಿಗಳಲ್ಲಿ ಶೌಚಾಲಯ ವ್ಯವಸ್ಥೆ, ಶುದ್ಧ ಕುಡಿಯುವ ನೀರು, ಸ್ವಚ್ಛ ಪರಿಸರ , ಸ್ಥಳಾವಕಾಶದ ಕೊರತೆ ಇರುವುದರಿಂದ ಗರ್ಭಿಣಿ, ಬಾಣಂತಿಯರೆ ಖುದ್ದಾಗಿ ಬಂದು ಆಹಾರವನ್ನು ಇಲ್ಲೇ ಸೇವಿಸಬೇಕಾಗಿರುವುದರಿಂದ ಮಹಿಳೆಯರು ಬರುತ್ತಿಲ್ಲ.

ಸಮಿತಿ ಸದಸ್ಯರು ಎಲ್ಲ ಅಂಶಗಳನ್ನು ಚರ್ಚಿಸಿ ಅಂಗನವಾಡಿಗಳಿಗೆ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸಿಕೊಡುವಂತೆ ಸರಕಾರಕ್ಕೆ ಶಿಫಾರಸು ಮಾಡುವುದಾಗಿ ತಿಳಿಸಿದರು.

ಚಿಕ್ಕಬಾಣಾವರದ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಹಾಗೂ ತರಬೇತಿ ಕೇಂದ್ರದಲ್ಲಿ ಆಹಾರ ಪದಾರ್ಥಗಳನ್ನು ಸ್ವಚ್ಛ ಪರಿಸರದಲ್ಲಿ ಯಂತ್ರಗಳ ಸಹಾಯದಿಂದ ಸಿದ್ಧಪಡಿಸುವ ಮೂಲಕ ಗುಣಮಟ್ಟಕ್ಕೆ ಆದ್ಯತೆ ನೀಡಿದ್ದಾರೆ. ರಾಜ್ಯಾದ್ಯಂತ ಇರುವ ಇತರೆ ಎಂಎಸ್ ಪಿಟಿಸಿಗಳು ಇಂಥ ವ್ಯವಸ್ಥೆಯನ್ನು ಅಳವಡಿಸಿಕೊಂಡರೆ ಉತ್ತಮ ಎಂದರು.

ಸಿದ್ಧಪಡಿಸಿದ ಸಾಂಬಾರ್ ಪುಡಿಯನ್ನು ಖರೀದಿಸಿ ಸರಬರಾಜು ಮಾಡುವ ಬದಲು ಇಲ್ಲೆ ತಯಾರಿಸಿದರೆ ಗುಣಮಟ್ಟ ಇನ್ನೂ ಹೆಚ್ಚುತ್ತದೆ ಎಂದು ಸಲಹೆ ನೀಡಿದರು.

ಸಮಿತಿ ಸದಸ್ಯರಾದ ಡಾ. ಅಂಜಲಿ ಹೇಮಂತ್ ನಿಂಬಾಳ್ಕರ್, ಸುನೀಲ್ ಸುಬ್ರಮಣಿ ಹಾಗೂ ಜಂಟಿ ಕಾರ್ಯದರ್ಶಿ ಮಲ್ಲಪ್ಪ ಕಾಳೆ, ಎಂಎಸ್ ಪಿಟಿಸಿ ಅಧ್ಯಕ್ಷೆ ಮೀನಾ ಕುಮಾರಿ, ಘಟಕದ ಮುಖ್ಯಸ್ಥೆ ಮಂಜುಳಾ ಸೂರ್ಯ, ಐಎಸ್ ಡಿಎಸ್ ಜಂಟಿ ನಿರ್ದೇಶಕಿ ರೇವತಿ, ಉಪ ನಿರ್ದೇಶಕಿ ಉಷಾ ಇತರರಿದ್ದರು.



**ಚಿಕ್ಕಬಾಣಾವರದ ಆಹಾರ ಉತ್ಪಾದನಾ ಹಾಗೂ ತರಬೇತಿ ಕೇಂದ್ರಕ್ಕೆ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಭೇಟಿ ನೀಡಿ ಪರಿಶೀಲನೆ ನಡೆಸಿತು.**